ESTD : No. JRB/Cell.II/69/Regn-4876/77-78 ✆:080-26601442
Date : 09-12-1977

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

THE BANGALORE CITY DIST. CO-OPERATIVE UNION LTD.,
' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018
E-mail: bcdcu1977@gmail.com

**ಜೆ. ಮಂಜುನಾಥ್** ಅಧ್ಯಕ್ಷರು | **ಕೃಷ್ಣಪ್ಪ ಕೆ.ಸಿ.** ಉಪಾಧ್ಯಕ್ಷರು | **ಗೌತಮ್ ಹೆಚ್.ಎನ್.** ಖಜಾಂಚಿ

## ಪ್ರಕಟಣೆಗಾಗಿ

### ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ಸದಸ್ಯರು ಮತ್ತು ಅಧಿಕಾರಿಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮ

ಬೆಂಗಳೂರು :- ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು, ದಿನಾಂಕ: 27-03-2025 **ಪತ್ತಿನ ಸಹಕಾರ ಸಂಘಗಳ ಆಡಳಿತ ಮಂಡಳಿ ಸದಸ್ಯರು ಮತ್ತು ಅಧಿಕಾರಿಗಳಿಗೆ** ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಇಲ್ಲಿ ಏರ್ಪಡಿಸಲಾಗಿತ್ತು.

ಸಮಾರಂಭದ ಉದ್ಘಾಟನೆಯನ್ನು ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕರಾದ **ಶ್ರೀ ಚಾಮರಾಜು,** ಇವರು ನೆರವೇರಿಸಿ ಮಾತನಾಡುತ್ತಾ, ಇತ್ತೀಚಿನ ಕಾಯ್ದೆ ಕಾನೂನು ತಿದ್ದುಪಡಿಯಾದಂತೆ ನಾವು ತರಬೇತಿಯನ್ನು ಪಡೆಯಲು ಅತ್ಯವಶ್ಯಕವಾಗಿದೆ ಹಾಗೂ ಮಹಾಮಂಡಳ ಇಂತಹ ತರಬೇತಿಗಳನ್ನು ನೀಡುತ್ತಿರುವುದಕ್ಕೆ ಧನ್ಯವಾಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಜೆ. ಮಂಜುನಾಥ್ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಮಾರ್ಗದರ್ಶನದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ಸಹಕಾರ ಶಿಕ್ಷಣ, ತರಬೇತಿಗಳನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ. ಇಂತಹ ತರಬೇತಿ ಕಾರ್ಯಕ್ರಮಗಳಲ್ಲಿ ಸಹಕಾರ ಸಂಘಗಳ ಪದಧಿಕಾರಿಗಳು, ನಿರ್ದೇಶಕರು, ಸದಸ್ಯರು ಮತ್ತು ಅಧಿಕಾರಿ ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತರಬೇತಿಯಲ್ಲಿ ನೀಡುವಂತಹ ಮಾಹಿತಿಗಳನ್ನು ನಿಮ್ಮ ಸಂಘಗಳಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಒಕ್ಕೂಟದ ವತಿಯಿಂದ ಮುಂದಿನ ದಿನಗಳಲ್ಲಿ ಇನ್ನೂ ಅನೇಕ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಹಕಾರ ಸಂಘಗಳ ಉಪನಿಬಂಧಕರು (ನಿವೃತ್ತ), ಬೆಂಗಳೂರು ಶ್ರೀ ಎಸ್.ಜಿ. ಮಂಜುನಾಥಸಿಂಗ್ "ಸಹಕಾರ ಸಂಘಗಳಲ್ಲಿ ಉಪನಿಯಮಗಳ ಮಹತ್ವ ಮತ್ತು ಇತ್ತೀಚಿನ ಸಹಕಾರ ಕಾಯ್ದೆ ಕಾನೂನು ತಿದ್ದುಪಡಿಗಳು" ಕುರಿತು ಉಪನ್ಯಾಸವನ್ನು ನೀಡಿದರು ಮತ್ತು ರಾಜ್ಯ ತರಬೇತುದಾರರು, ಬೆಂಗಳೂರು ಶ್ರೀ ಸ್ವಾರ್ ವೆಂಕಟೇಶ್, "ಒತ್ತಡಗಳ ನಿರ್ವಹಣೆ ಮತ್ತು ಸಂವಾಹನ " ಕುರಿತು ಉಪನ್ಯಾಸವನ್ನು ನೀಡಿದರು.

ಮುಖ್ಯ ಅತಿಥಿಗಳಾಗಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕರಾದ ಚಾಮರಾಜು ಕೆ.ಎಸ್. ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸವಿತಾ ಬಿಸನಾಳ ಕಾರ್ಯಕ್ರಮ ನಿರೂಪಿಸಿದರು, ಜಿಲ್ಲಾ ಸಹಕಾರ ಶಿಕ್ಷಕರಾದ ಶ್ರೀ ಮಂಜುನಾಥ ನಾಗಠಾಣ, ಶ್ರೀಮತಿ ಲಕ್ಷ್ಮೀ, ವ್ಯವಸ್ಥಾಪಕರಾದ ಶ್ರೀ ಆರ್. ನಾಗರಾಜ್, ಸಿಬ್ಬಂದಿ ಮಾರುತಿ ಉಪಸ್ಥಿತರಿದ್ದರು.

ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,ಬೆಂಗಳೂರು
ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಹಾಗೂ
ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಬೆಂಗಳೂರು
ಕಾರ್ಯಕ್ರಮ


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,ಬೆಂಗಳೂರು
ಬೆಂಗಳೂರು
ಸಹಕಾರ ಹಾಲು
ಬೆಂಗಳೂರು
ಇವರುಗಳ ಸಂಯುಕ್ತ
ಉತ್ಪಾದಕರ ಸಹಕಾರ